## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರಿ ನೌಕರರು ಮಾನ್ಯತೆ ಹೊಂದಿರದ ರಾಜ್ಯದ ಖಾಸಗಿ ಆಸ್ಪತ್ರೆಗಳಲ್ಲಿ ಪಡೆದ ರೂ.2.00 ಲಕ್ಷಗಳವರೆಗಿನ ವೈದ್ಯಕೀಯ ವೆಚ್ಚವನ್ನು ಮರುಪಾವತಿಸಲು ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರ ಮಿತಿಯನ್ನು ಹೊರರಾಜ್ಯದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದ ಪ್ರಕರಣಗಳಿಗೂ ವಿಸ್ತರಿಸುವ ಕುರಿತು.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 34 ಎಸ್‌ಎಂಆರ್ 2011, ದಿ:28.09.2011.
2) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 31 ಎಸ್‌ಎಂಆರ್ 2014, ದಿ:05.11.2014.

*******

**ಪ್ರಸ್ತಾವನೆ:**

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ನಿಯಮ 8 ಮತ್ತು ನಿಯಮ 14(3)ಕ್ಕೆ ಸಂಬಂಧಪಟ್ಟ ಷೆಡ್ಯೂಲ್-I ಹಾಗೂ IIರಲ್ಲಿ ಸೂಚಿಸಿರುವ ಸರ್ಕಾರದಿಂದ ಮಾನ್ಯತೆ ಹೊಂದಿರುವ ಆಸ್ಪತ್ರೆಗಳನ್ನು ಹೊರತುಪಡಿಸಿ, ಮಾನ್ಯತೆ ಹೊಂದಿರದ ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳಲ್ಲಿ ಸರ್ಕಾರಿ ನೌಕರರು ಪಡೆಯುವ ವೈದ್ಯಕೀಯ ಚಿಕಿತ್ಸಾ ವೆಚ್ಚವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ, ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರು ನೀಡುವ ಅಭಿಪ್ರಾಯದಂತೆ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ನಿಯಮ 31ರಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ನಿಯಮ 14ನ್ನು ಸಡಿಲಿಸಿ, ಅರ್ಹತಾ ಮೊತ್ತ ರೂ.1.00 ಲಕ್ಷದವರೆಗಿನ ವೈದ್ಯಕೀಯ ವೆಚ್ಚವನ್ನು ಮರುಪಾವತಿಸಲು ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಸಂಬಂಧಪಟ್ಟ ಆಡಳಿತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿದ್ದ ಅಧಿಕಾರ ಮಿತಿಯನ್ನು ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದನ್ವಯ ರೂ.2.00 ಲಕ್ಷಗಳಿಗೆ (ಎರಡು ಲಕ್ಷ ರೂಪಾಯಿಗಳು) ಹೆಚ್ಚಿಸಲಾಗಿದೆ. ಸದರಿ ಆದೇಶದಲ್ಲಿ ಸರ್ಕಾರದಿಂದ ಮಾನ್ಯತೆ ಪಡೆಯದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ರಾಜ್ಯ ಸರ್ಕಾರಿ ನೌಕರರು ಮರುಪಾವತಿಗಾಗಿ ಸಲ್ಲಿಸುವ ಎಲ್ಲಾ ಕ್ಲೇಮುಗಳನ್ನು ಯಾಂತ್ರಿಕವಾಗಿ ಪರಿಗಣಿಸದೇ ಅಪವಾದಾತ್ಮಕವಾದ ಪ್ರಕರಣವಾಗಿ ಪರಿಗಣಿಸಿ, ಸರ್ಕಾರಿ ನೌಕರರ ಮತ್ತು ಅವರ ಕುಟುಂಬದ ಸದಸ್ಯರ ಜೀವನ್ಮರಣದ ಸನ್ನಿವೇಶದಲ್ಲಿ ಹಾಗೂ ಕೆಲವು ತುರ್ತು ಸಂದರ್ಭಗಳಲ್ಲಿ ಮಾನ್ಯತೆ ಪಡೆಯದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಂತಹ ಪ್ರಕರಣಗಳನ್ನು ಮಾತ್ರ ನಿಯಮ ಸಡಿಲಿಸಲು ಪರಿಗಣಿಸಬೇಕೆಂದು ಸೂಚಿಸಲಾಗಿದೆ.

ಆದರೆ ಸದರಿ ಅಧಿಕಾರ ಪ್ರತ್ಯಾಯೋಜನೆಯು ಸರ್ಕಾರದಿಂದ ಮಾನ್ಯತೆ ಹೊಂದಿರದ ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳಲ್ಲಿ ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರು ಚಿಕಿತ್ಸೆ ಪಡೆದ ಪ್ರಕರಣಗಳಿಗೆ ಮಾತ್ರ ಅನ್ವಯವಾಗಲಿದ್ದು, ಹೊರ ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದ ಪ್ರಕರಣಗಳಿಗೆ ಅನ್ವಯವಾಗುವುದಿಲ್ಲ. ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರು ಹೊರ ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದ ಎಲ್ಲಾ ಮರುಪಾವತಿ ಪ್ರಕರಣಗಳು ನಿಯಮ ಸಡಿಲಿಕೆಗಾಗಿ ಆಡಳಿತ ಇಲಾಖೆಗಳ ಮೂಲಕ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು)ಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸ್ವೀಕೃತವಾಗುತ್ತಿದ್ದು, ಇದರಿಂದಾಗಿ, ವೈದ್ಯಕೀಯ ವೆಚ್ಚ ಮರುಪಾವತಿಯು ವಿಳಂಬವಾಗಿ ಸರ್ಕಾರಿ ನೌಕರರಿಗೆ ಅನಾನುಕೂಲವಾಗುತ್ತಿರುವುದನ್ನು ಪರಿಗಣಿಸಿ, ಆಡಳಿತ ಇಲಾಖೆಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಪ್ರತ್ಯಾಯೋಜಿಸಲಾಗಿರುವ ರೂ.2.00 ಲಕ್ಷದವರೆಗಿನ ವೈದ್ಯಕೀಯ ವೆಚ್ಚದ ಮರುಪಾವತಿ ಅಧಿಕಾರವನ್ನು, ಸದರಿ ಆದೇಶದಲ್ಲಿ ವಿಧಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳಿಗೊಳಪಡಿಸಿ,

ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರು ಹೊರ ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದ ಪ್ರಕರಣಗಳಿಗೂ ವಿಸ್ತರಿಸಲು ತೀರ್ಮಾನಿಸಲಾಗಿದೆ.

ಅದರಂತೆ, ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 31 ಎಸ್‌ಎಂಆರ್ 2014, ಬೆಂಗಳೂರು, ದಿ: 05.11.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರದಿಂದ ಮಾನ್ಯತೆ ಹೊಂದಿರುವ ಆಸ್ಪತ್ರೆಗಳನ್ನು ಹೊರತುಪಡಿಸಿ, ಮಾನ್ಯತೆ ಹೊಂದಿರದ ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳಲ್ಲಿ ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರು ಚಿಕಿತ್ಸೆ ಪಡೆದ ಪ್ರಕರಣಗಳ ವೈದ್ಯಕೀಯ ವೆಚ್ಚವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ, ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರು ನೀಡುವ ಅಭಿಪ್ರಾಯದಂತೆ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ನಿಯಮ 31ರಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ನಿಯಮ 14ನ್ನು ಸಡಿಲಿಸಿ ಅರ್ಹತಾ ಮೊತ್ತ ರೂ.2.00 ಲಕ್ಷದವರೆಗಿನ ವೈದ್ಯಕೀಯ ವೆಚ್ಚವನ್ನು ಮರುಪಾವತಿಸಲು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 31 ಎಸ್‌ಎಂಆರ್ 2014 ದಿನಾಂಕ 05.11.2014ರಲ್ಲಿ ಸಂಬಂಧಪಟ್ಟ ಆಡಳಿತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರವನ್ನು ಸದರಿ ಆದೇಶದಲ್ಲಿ ವಿಧಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳಿಗೊಳಪಡಿಸಿ, ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರು ಹೊರ ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದ ಪ್ರಕರಣಗಳಿಗೂ ವಿಸ್ತರಿಸಿ ಆದೇಶಿಸಲಾಗಿದೆ. ಸದರಿ ಅಧಿಕಾರ ಪ್ರತ್ಯಾಯೋಜನೆಯು ಈ ಆದೇಶವನ್ನು ಹೊರಡಿಸಿದ ದಿನಾಂಕದ ನಂತರ ಚಿಕಿತ್ಸೆ ಪಡೆದಿರುವ ಪ್ರಕರಣಗಳಿಗೆ ಅನ್ವಯವಾಗತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 481 ಆನಿ 2015 ದಿ: 20.08.2015 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಉಮಾ. ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2).

**ಇವರಿಗೆ:**

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ ವಿಭಾಗ, ಸರ್ಕಾರಿ ಹೊರವಲಯ ಮುದ್ರಣಾಲಯ, ಯೂನಿಟ್-2, ಮೈಸೂರು ರಸ್ತೆ, ಬೆಂಗಳೂರು- ಇದನ್ನು ಕರ್ನಾಟಕ ರಾಜ್ಯಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಸೇವಾ ನಿಯಮಗಳು-2), ಕೊಠಡಿ ಸಂಖ್ಯೆ: 30, ವಿಧಾನಸೌಧ, ಬೆಂಗಳೂರು-560 001 ಇವರಿಗೆ ಒದಗಿಸಲು **(ಮುಖಪತ್ರದೊಂದಿಗೆ)**

**ಪ್ರತಿಗಳು:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

3. ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು.
4. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
7. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತು, ವಿಧಾನ ಸೌಧ, ಬೆಂಗಳೂರು.
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
9. ಎಲ್ಲಾ ಇಲಾಖಾ ಮುಖ್ಯಸ್ಥರು.
10. ಎಲ್ಲಾ ಪಾದೇಶಿಕ ಆಯುಕ್ತರು.
11. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
12. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-9.
13. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-9.
14. ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು-560 009.
15. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಆಸ್ಪತ್ರೆಗಳ ಜಿಲ್ಲಾ ವೈದ್ಯಾಧಿಕಾರಿಗಳು.
16. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
17. ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009.
18. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
19. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
20. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
21. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
22. ಸಚಿವಾಲಯದ ಎಲ್ಲಾ ಶಾಖೆಗಳು.
23. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು
24. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು